ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 11–11–2021

# ಪತ್ರಿಕಾ ಪ್ರಕಟಣೆ

**PRESS RELEASE**

## ಪ್ರಮಾಣ ವಚನ ಸ್ವೀಕಾರ

ಬೆಂಗಳೂರು, 11ನೇ ನವೆಂಬರ್ (ಕರ್ನಾಟಕ ವಾರ್ತೆ):
15ನೇ ವಿಧಾನಸಭೆಗೆ ಅಕ್ಟೋಬರ್ 2021ರ ತಿಂಗಳಿನಲ್ಲಿ ನಡೆದ ಉಪಚುನಾವಣೆಯಲ್ಲಿ ಸಿಂಧಗಿ ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದ ಭೂಸನೂರ ರಮೇಶ್ ಬಾಳಪ್ಪ ಅವರು ಶಾಸಕರಾಗಿ ಭಗವಂತನ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಇಂದು ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾಗಿದ್ದ ಸರಳ ಕಾರ್ಯಕ್ರಮದಲ್ಲಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಪ್ರಮಾಣವಚನ ಬೋಧಿಸಿದರು.

ಕಾರ್ಯಕ್ರಮದಲ್ಲಿ ವಿಧಾನ ಸಭೆಯ ಕಾರ್ಯದರ್ಶಿ ಶ್ರೀಮತಿ ವಿಶಾಲಾಕ್ಷಿ ಅವರು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಮತದಾರರ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ 2022ರ ಕರಡು ಮತದಾರರ ಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ) :

ರಾಜ್ಯದ 222 ವಿಧಾನಸಭಾ ಕ್ಷೇತ್ರಗಳಲ್ಲಿ ನವೆಂಬರ್ 30, 2021 ರಂದು ಉಪ ಚುನಾವಣೆ ನಡೆದ ವಿಧಾನಸಭಾ ಕ್ಷೇತ್ರಗಳಾದ ವಿಜಯಪುರ ಜಿಲ್ಲೆಯ 33– ಸಿಂದಗಿ ಹಾಗೂ ಹಾವೇರಿ ಜಿಲ್ಲೆಯ 82– ಹಾನಗಲ್ ವಿಧಾನಸಭಾ ಕ್ಷೇತ್ರಗಳನ್ನು ಹೊರತುಪಡಿಸಿ, ಮತದಾರರ ಪಟ್ಟಿಗಳ ವಿಶೇಷ ಪರಿಷ್ಕರಣೆ ಕಾರ್ಯಕ್ರಮ ಅರ್ಹತಾ ದಿನಾಂಕ: 01–01–2022 ರಡಿ ಮತದಾರರ ಪಟ್ಟಿಗಳನ್ನು ಪರಿಷ್ಕರಿಸಲಾಗುತ್ತಿದ್ದು, 222 ವಿಧಾನಸಭಾ ಕ್ಷೇತ್ರಗಳಲ್ಲಿ ಕರಡು ಮತದಾರರ ಪಟ್ಟಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿ, ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಛೇರಿ ಹಾಗೂ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮತಗಟ್ಟೆಗಳಲ್ಲಿ ಸಾರ್ವಜನಿಕರ ತಿಳುವಳಿಕೆಗಾಗಿ ನವೆಂಬರ್ 08 ರಂದು ಪ್ರಕಟಿಸಲಾಗಿದೆ.

ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ವೇಳಾಪಟ್ಟಿಯು ಸಂಯೋಜಿತ ಕರಡು ಮತದಾರರ ಪಟ್ಟಿಯ ಪ್ರಕಟಣೆ ನವೆಂಬರ್ 08, 2021, ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಭರ್ತಿ ಮಾಡುವ ಅವಧಿ ನವೆಂಬರ್ 08 ರಿಂದ ಡಿಸೆಂಬರ್ 08 ರವರೆಗೆ, ವಿಶೇಷ ಪ್ರಚಾರದ ದಿನಾಂಕಗಳು ನವೆಂಬರ್ 07, 14, 21, ಹಾಗೂ 28, ಹಕ್ಕುಗಳು ಮತ್ತು ಆಕ್ಷೇಪಣೆಗಳ ವಿಲೇವಾರಿ ಡಿಸೆಂಬರ್ 27, 2021, ಮತದಾರರ ಪಟ್ಟಿಯ ಅಂತಿಮ ಪ್ರಕಟಣೆ ಜನವರಿ 13, 2022 ರಂದು ಮತದಾರರ ಪಟ್ಟಿಯನ್ನು ಪರಿಷ್ಕರಣೆ ಕೈಗೊಳ್ಳಲಾಗುತ್ತಿದೆ.

ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಯನ್ನು www.ceokarnataka.kar.nic.in ನ ಅಧಿಕೃತ ಜಾಲತಾಣದಲ್ಲಿ ಸಾರ್ವಜನಿಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾದ ಬಗ್ಗೆ ಪರಿಶೀಲಿಸುವುದು ಹಾಗೂ ಸರಿಯಾದ ಹೆಸರನ್ನು ನಮೂದುಗಳೊಂದಿಗೆ ನೋಂದಾಯಿಸಿದ ಬಗ್ಗೆ ಖಚಿತಪಡಿಸಿಕೊಳ್ಳುವುದು.

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ನೇಮಕವಾಗಿರುವ ಅಧಿಸೂಚಿತ ಮತದಾರರ ನೋಂದನಾಧಿಕಾರಿಗಳು/ ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ನಿಗಧಿತ ನಮೂನೆಗಳಲ್ಲಿ ಅವಶ್ಯಕ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು. ನಮೂನೆ–6 ಹೆಸರು ಸೇರ್ಪಡೆ, ನಮೂನೆ–7 ಹೆಸರು ತೆಗೆದು ಹಾಕುವಿಕೆ, ನಮೂನೆ–8 ಮುದ್ರಿತ ನಮೂದುಗಳಲ್ಲಿ ತಿದ್ದುಪಡಿಗಳು, ನಮೂನೆ–8A- ಅದೇ ವಿಧಾನಸಭಾ ಕ್ಷೇತ್ರದಲ್ಲಿ ಒಂದು ಮತಗಟ್ಟೆಯ ವ್ಯಾಪ್ತಿಯಿಂದ ಇನ್ನೊಂದು ಮತಗಟ್ಟೆಯ ವ್ಯಾಪ್ತಿಗೆ ಬದಲಾವಣೆ ಪ್ರಕ್ರಿಯೆಗಳನ್ನು ಕೈಗೊಳ್ಳುವುದು, ಅಲ್ಲದೇ www.nvsp.in Voter Helpline Mobile App ನ ಮುಖಾಂತರವೂ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

ಎಲ್ಲಾ ಅರ್ಹ ವ್ಯಕ್ತಿಗಳನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಬೇಕಾಗಿದ್ದು, ಮತದಾರರ ಪಟ್ಟಿಗೆ ಸೇರ್ಪಡೆ, ತಿದ್ದುಪಡಿ ಹಾಗೂ ವಿವರಗಳು/ ನಮೂದುಗಳು ತಪ್ಪಾಗಿದ್ದಲ್ಲಿ ಅವುಗಳನ್ನು ತೆಗೆದು ಹಾಕುವಿಕೆ ಹಾಗೂ ತಿದ್ದುಪಡಿ ಮೂಲಕ ಸರಿಪಡಿಸುವುದು.

ಎಲ್ಲಾ ಅರ್ಹ ಮತದಾರರಿಗೆ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ನೀಡಲಾಗಿದ್ದು, ಪ್ರಸ್ತುತ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ ಅರ್ಹತಾ ದಿನಾಂಕ: 01–01–2022 ರಡಿ ಹೊಸದಾಗಿ ಸೇರ್ಪಡೆಯಾಗುವ ಎಲ್ಲಾ ಮತದಾರರಿಗೆ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ನೀಡಲಾಗುವುದು.

ಎಲ್ಲಾ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲು ಹಾಗೂ ದೋಷರಹಿತ ಮತದಾರರ ಪಟ್ಟಿಯನ್ನು ತಯಾರಿಸಲು ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಅವಶ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮತದಾರರ ಪಟ್ಟಿ/ ಮತದಾರರ ಗುರುತಿನ ಚೀಟಿ ವಿವರಗಳ ಮಾಹಿತಿ ಅವಶ್ಯವಿದ್ದಲ್ಲಿ ಸಂಬಂಧಪಟ್ಟ ಜಿಲ್ಲಾ ಚುನಾವಣಾಧಿಕಾರಿಗಳು / ಮತದಾರರ ನೋಂದಣಾಧಿಕಾರಿಗಳು / ಸಹಾಯಕ ನೋಂದಣಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬಾಲಕಾರ್ಮಿಕರ ಹಾಗೂ ಕಿಶೋರ ಕಾರ್ಮಿಕರ ಸಮೀಕ್ಷೆ ಕೈಗೊಳ್ಳಲು ಸ್ವಯಂ ಸೇವಾ ಸಂಸ್ಥೆಗಳಿಂದ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ) :

ಬೆಂಗಳೂರು ನಗರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಬಾಲಕಾರ್ಮಿಕರ ಹಾಗೂ ಕಿಶೋರ ಕಾರ್ಮಿಕರ ಸಮೀಕ್ಷೆಯನ್ನು ಕೈಗೊಳ್ಳಲು ಅರ್ಹ ಸ್ವಯಂ ಸೇವಾ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸೂಕ್ತವಾದ ಅನುಭವಿ/ ಪರಿಣಿತ ಸರ್ಕಾರೇತರ ಸಂಸ್ಥೆ ಅಥವಾ ಶೈಕ್ಷಣಿಕ ವಿಶ್ವವಿದ್ಯಾನಿಲಯಗಳ ಸಾಮಾಜಿಕ ಕಾರ್ಯ/ ಅಭಿವೃದ್ಧಿ/ ಮಹಿಳಾ ವಿಭಾಗಗಳ ಅರ್ಹ ಆಸಕ್ತ ಸ್ವಯಂಸೇವಾ ಸಂಸ್ಥೆಯವರು 7 ದಿನಗಳೊಳಗಾಗಿ ಸಹಾಯಕ ಕಾರ್ಮಿಕ ಆಯುಕ್ತರು, ಉಪವಿಭಾಗ–4 ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಕೊಠಡಿ ಸಂಖ್ಯೆ–3, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು– 560029 ಇಲ್ಲಿಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವಿವಿಧ ಕೋರ್ಸುಗಳಿಗೆ ಪ್ರವೇಶಾತಿ ಆರಂಭ

ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ) :

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಬೆಂಗಳೂರು ಪ್ರಾದೇಶಿಕ ಕೇಂದ್ರದಲ್ಲಿ ಪ್ರಸಕ್ತ 2021–22ನೇ ಜುಲೈ, ನವೆಂಬರ್ ಆವೃತ್ತಿ ಸಾಲಿಗೆ ದ್ವಿತೀಯ/ತೃತೀಯ ವರ್ಷದ ಸ್ನಾತಕ/ಸ್ನಾತಕೋತ್ತರ ಕೋರ್ಸ್‌ಗಳಾದ ಬಿ.ಎ, ಬಿ.ಕಾಂ, ಎಂ.ಎ, ಎಂ.ಕಾಂ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ (ಎಂ.ಸಿ.ಜೆ), ಎಂ.ಎಸ್ಸಿ, ಎಂ.ಬಿ.ಎ ಪ್ರವೇಶಾತಿಗೆ ಆರಂಭವಾಗಿದೆ.

ದಂಡ ಶುಲ್ಕವಿಲ್ಲದೆ ದ್ವಿತೀಯ/ ತೃತೀಯ ವರ್ಷದ ಕೋರ್ಸುಗಳಿಗೆ ನವೆಂಬರ್ 20 ಕೊನೆಯ ದಿನಾಂಕವಾಗಿದೆ. ರೂ.200/– ದಂಡ ಶುಲ್ಕದೊಂದಿಗೆ ಡಿಸೆಂಬರ್ 03 ಹಾಗೂ ರೂ. 400/– ರೂ ದಂಡ ಶುಲ್ಕದೊಂದಿಗೆ ಡಿಸೆಂಬರ್ 22 ರಂದು ಅಂತಿಮ ದಿನಾಂಕವಾಗಿರುತ್ತದೆ.

ಅರ್ಹ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ www.ksoumysuru.ac.in ನಲ್ಲಿ ಪ್ರವೇಶಾತಿ ಶುಲ್ಕ ಹಾಗೂ ಆನ್‌ಲೈನ್‌ನಲ್ಲಿ ಪ್ರವೇಶಾತಿ ಅರ್ಜಿ ಭರ್ತಿ ಮಾಡಿದ ನಂತರ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಪ್ರಾದೇಶಿಕ ಕೇಂದ್ರಕ್ಕೆ ಭೇಟಿ ನೀಡಿ ಪ್ರವೇಶಾತಿ ಪಡೆಯಬಹುದಾಗಿದೆ.

ಬಿ.ಪಿ.ಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕದಲ್ಲಿ ಶೇಖಡಾ 25ರಷ್ಟು ವಿನಾಯಿತಿ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080–26603664, ಮೊಬೈಲ್ ಸಂಖ್ಯೆ: 9448668880 ಹಾಗೂ ಕಚೇರಿ ವಿಳಾಸ: ಪ್ರಾದೇಶಿಕ ನಿರ್ದೇಶಕರು, ಬೆಂಗಳೂರು ಪ್ರಾದೇಶಿಕ ಕೇಂದ್ರ, ನಂ.61, 5ನೇ ಮುಖ್ಯ ರಸ್ತೆ, 5ನೇ ಅಡ್ಡ ರಸ್ತೆ, ಚಾಮರಾಜಪೇಟೆ, ಬೆಂಗಳೂರು–18 ನ್ನು ಸಂಪಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## NTS ಪರೀಕ್ಷೆಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ) :

NCERT, ನವದೆಹಲಿ ರವರ ಮಾರ್ಗಸೂಚಿಯಂತೆ NTS ಪರೀಕ್ಷೆಯನ್ನು ಎರಡು ಹಂತಗಳಲ್ಲಿ ನಡೆಸಲಾಗುತ್ತಿದ್ದು, ಮೊದಲನೇ ಹಂತದ ಪರೀಕ್ಷೆಯನ್ನು ರಾಜ್ಯ ಮಟ್ಟದಲ್ಲಿ ಜನವರಿ 16, 2022 ರಂದು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲು ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗುತ್ತಿದೆ.

NTS ನ ಮೊದಲನೇ ಹಂತದ ಪರೀಕ್ಷೆಯನ್ನು ಸರ್ಕಾರಿ, ಸ್ಥಳೀಯ ಸಂಸ್ಥೆಗಳ ಶಾಲೆಗಳು, ಅನುದಾನಿತ, ಅನುದಾನರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ದೂರ ಶಿಕ್ಷಣದಲ್ಲಿ 10ನೇ ತರಗತಿಗೆ ನೋಂದಾಯಿಸಿಕೊಂಡಿರುವ ಮತ್ತು ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತಿದೆ.

ಈ ಪರೀಕ್ಷೆಯ ಆನ್‌ಲೈನ್ ಅರ್ಜಿಯು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ **https://sslc.karnataka.gov.in** ವೆಬ್‌ಸೈಟ್‌ನಲ್ಲಿ ಲಭ್ಯವಿದೆ. ಶಾಲಾ ಮುಖ್ಯಶಿಕ್ಷಕರು ತಮ್ಮ ಶಾಲೆಯ ವಿದ್ಯಾರ್ಥಿಗಳ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಮಂಡಳಿಯ ವೆಬ್‌ಸೈಟ್‌ನಲ್ಲಿ ಲಭ್ಯವಿರುವ NTSE ಲಾಗಿನ್‌ನಲ್ಲಿ ಸಲ್ಲಿಸುವುದು. ಅರ್ಜಿ ಸಲ್ಲಿಸಲು **ನವೆಂಬರ್ 30, 2021** ರಂದು ಕೊನೆಯ ದಿನಾಂಕವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಕೆ.ಎಸ್.ಕ್ಯು.ಎ.ಎ.ಸಿ ಕಛೇರಿಯ ಸ್ಥಿರ ದೂರವಾಣಿ ಸಂಖ್ಯೆ: **080–23341615** ಅನ್ನು ಸಂಪರ್ಕಿಸುವುದು. ಇಲಾಖೆಯ ಜಿಲ್ಲಾ ಉಪನಿರ್ದೇಶಕರು ಹಾಗೂ ತಾಲ್ಲೂಕಿನ ಕ್ಷೇತ್ರಶಿಕ್ಷಣಾಧಿಕಾರಿಗಳು ಶಾಲಾ ಮುಖ್ಯ ಶಿಕ್ಷಕರ ಸಭೆ ಕರೆದು ಪರೀಕ್ಷೆಗೆ ಅರ್ಜಿ ಸಲ್ಲಿಸುವ ಸಂಬಂಧ ಸೂಕ್ತ ಮಾರ್ಗದರ್ಶನ ನೀಡಬೇಕೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Online Applications Invited for NTS Exam

**Bengaluru, November 11, (Karnataka Information):**

As per the guidelines of NCERT, New Delhi, NTS Examination is being conducted at two levels. First level examination at State level will be conducted on 16-01-2022 by K.S.Q.A.A.C., Karnataka Secondary Education Examination Board and applications are being invited through online from 11-11-2021.

First level NTS examination will be conducted for students studying in Class 10 of Government, Local body schools, Aided, Unaided schools and also students who have registered for Class 10 Examination through Distance education and applied for this examination. Online application for this examination is provided in Karnataka Secondary Education Examination Board website https://sslc.karnataka.gov.in School head teachers have to submit their school students' application through NTSE login provided in the Board website. The last date to submit the online application is 30-11-2021.

For more information please go through the circular provided in Board website and contact us through K.S.Q.A.A.C. Office landline number:080- 23341615. The Deputy Directors of Public Instruction of all the Districts and all the Block Education Officers are instructed to conduct School head teachers meeting and provide suitable guidance to apply for this examination.

## ಪ್ರಾಂಶುಪಾಲರು ಮತ್ತು ಅಧ್ಯಾಪಕರುಗಳಿಗೆ ರಾಷ್ಟ್ರೀಯ ಶಿಕ್ಷಣ ನೀತಿ –2020

## ಕುರಿತಂತೆ ಒಂದು ದಿವಸದ ಓರಿಯೆಂಟೇಶನ್ ಕಾರ್ಯಕ್ರಮ

ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ) :

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020 ಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಗತ್ಯ ಮಾಹಿತಿಗಳನ್ನು ನೀಡಲು ಮತ್ತು ಪರಿಣಾಮಕಾರಿಯಾಗಿ ಜಾರಿಯಲ್ಲಿ ತರಲು ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಹೆಬ್ಬಾಳ, ಶಿವಾಜಿನಗರ, ಚಾಮರಾಜಪೇಟೆ, ಬಿ.ಟಿ.ಎಂ. ಲೇಔಟ್ ಮತ್ತು ರಾಜಾಜಿನಗರ ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರು ಮತ್ತು ಅಧ್ಯಾಪಕರುಗಳಿಗೆ. **ನವೆಂಬರ್ 16 ರಂದು ಬೆಳಿಗ್ಗೆ 11.00 ಗಂಟೆ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜು ಆವರಣ, ಜ್ಞಾನಜ್ಯೋತಿ ಸಭಾಂಗಣದಲ್ಲಿ ಒಂದು ದಿವಸದ ಓರಿಯೆಂಟೇಶನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.**

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಲಿಂಗರಾಜ ಗಾಂಧಿಯವರು, ಡಾ. ಟಿ. ಡಿ. ಕೆಂಪರಾಜು, ವಿಶ್ರಾಂತ ಕುಲಪತಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯ ಮತ್ತು ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಶಿಕ್ಷಣ ನೀತಿ ಕಾರ್ಯಪಡೆಯ ಸದಸ್ಯರುಗಳು ರಾಷ್ಟ್ರೀಯ ಶಿಕ್ಷಣ ನೀತಿ ಕುರಿತು ಉಪನ್ಯಾಸ ನೀಡಲಿದ್ದಾರೆ.

ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳ ಪ್ರಾಂಶುಪಾಲರು ಮತ್ತು ಅಧ್ಯಾಪಕರು ಕಡ್ಡಾಯವಾಗಿ ಓರಿಯೆಂಟೇಶನ್ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ನವೆಂಬರ್ 11 (ಕರ್ನಾಟಕ ವಾರ್ತೆ) :

**ದಿನಾಂಕ: 11.11.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 95 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 128 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 145 | ಸಾಧಾರಣ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೇಗೌಡನಗರ | 97 | ತೃಪ್ತಿಕರ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 99 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 95 | ತೃಪ್ತಿಕರ | CO |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 38 | ಉತ್ತಮ | $PM_{10}$ |
| **(11.11.2021 at 12.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 68 | ತೃಪ್ತಿಕರ | $PM_{10}$ |

| | | | | |
|---|---|---|---|---|
| 9 | ಪೀಣ್ಯ | 58 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 11.11.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 95 | Satisfactory | $PM_{10}$ |
| 2 | Jayanagar 5th Block, Shalini ground | 128 | Moderate | $PM_{2.5}$ |
| 3 | KAVIKA, Mysore Road | 145 | Moderate | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 97 | Satisfactory | $PM_{10}$ |
| 5 | HSR Layout, near Central Silkboard | 99 | Satisfactory | $PM_{10}$ |
| 6 | City Railway Station, Magestic, Bengaluru | 95 | Satisfactory | CO |
| 7 | Saneguruvanahalli, NisargaBhavan, KSPCB, Shivanagara | 38 | Good | $PM_{10}$ |

| (11.11.2021 at 12.05 AM) 6758 | | | | |
|---|---|---|---|---|
| 8 | BWSSB, Kadabesanahalli | 68 | Satisfactory | $PM_{10}$ |
| 9 | Peenya | 58 | Satisfactory | $PM_{2.5}$ |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |